7.3.22 (1)

**ಶ್ರೀ ಮರಿತಿಬ್ಬೇಗೌಡ, ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ, ಶ್ರೀ ಪಿ.ಆರ್.ರಮೇಶ್ ಹಾಗೂ ಶ್ರೀ ಅರುಣಾ ಶಹಾಪುರ ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳು ಇವರು ನಿಯಮ ೩೩೦ ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:** ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ಟ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ ಕೆ.ಜಿ.ಐ.ಡಿ. ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ಮಂಜೂರು ಮಾಡದೆ ಇರುವುದು. ವಸತಿ ಶಾಲೆಗಳಲ್ಲೇ ವಾಸವಿರುವ ಖಾಯಂ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡದೆ ಇರುವುದು. ಎನ್.ಪಿ.ಎಸ್. ಯೋಜನೆಯಡಿಯ ಶಿಕ್ಷಕರಿಗೆ ಸರ್ಕಾರ ನೀಡಬೇಕಾದ ಪಾಲಿನ ಹಣವನ್ನು ಸಮನಾಂತರವಾಗಿ ಪಾವತಿಸದೇ ಇರುವುದು. ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳನ್ನು ಸಕಾಲದಲ್ಲಿ ವಿತರಿಸದೆ ಇರುವುದು ಹಾಗೂ ಮೂಲಭೂತ ಸೌಕರ್ಯಗಳ ಕೊರತೆ. ಮುಂದುವರೆದು, ಅತಿಥಿ ಶಿಕ್ಷಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚನ್ಯಾಯಾಲಯ ನಿರ್ದೇಶನದಂತೆ ಸಕ್ರಮಗೊಳಿಸದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

****

**ಉತ್ತರ:-**

**ಡಿ.ಸಿ.ಆರ್.ಜಿ-** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಮರಣ ಉಪದಾನ (DCRG) ಸೌಲಭ್ಯ ವಿಸ್ತರಿಸುವ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

**ಕೆ.ಜಿ.ಐ.ಡಿ.:-** ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿರಸ್ಕರಿಸಿ ಹಿಂಬರಹ ನೀಡಿರುತ್ತದೆ.

**ಜ್ಯೋತಿ ಸಂಜೀವಿನಿ:-** ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ನೌಕರರು ಮತ್ತು ಅವರ ಅವಲಂಭಿತರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅಳವಡಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನೊಂದಿಗೆ ಸಮಾಲೋಚಿಸಿ ಯೋಜನೆ ಯನ್ನು ವಿಸ್ತರಿಸುವಂತೆ ಅಭಿಪ್ರಾಯ ನೀಡಿದೆ. ಅದರಂತೆ, ಕಾರ್ಯನಿರ್ವಾಹಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರು ಸಂಘದ ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಷರತ್ತುಗಳಿಗೆ ಒಳಪಟ್ಟು ತಾತ್ವಿಕ ಒಪ್ಪಿಗೆ ನೀಡಿರುತ್ತಾರೆ. ಅದರಂತೆ, ಈಗಾಗಲೇ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳ ಸಿಬ್ಬಂದಿಗಳು ಮತ್ತು ಅವರ ಅವಲಂಬಿತರ ಹೆಸರು, ವಯಸ್ಸು, ಆಧಾರ್, Bio metric finger impression/IRIS, ವಿಳಾಸ ಇತ್ಯಾದಿ ವಿವರಗಳನ್ನು ಸಂಘದ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ನಮೂದಿಸಲು ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ.

ಆದರೆ, ಪ್ರಸ್ತುತ ಲಭ್ಯವಿರುವ ಹೆಚ್.ಆರ್.ಎಮ್.ಎಸ್ ತಂತ್ರಾಂಶದಲ್ಲಿ ಮೇಲ್ಕಂಡ ಮಾಹಿತಿಯನ್ನು ನಮೂದಿಸಲು ತಾಂತ್ರಿಕ ತೊಂದರೆಗಳು ಇರುವುದಾಗಿ ವಸತಿ ಶಾಲೆಗಳ ಪ್ರಾಂಶುಪಾಲರು ತಿಳಿಸಿರುತ್ತಾರೆ. ಈ ಹಿನ್ನಲೆಯಲ್ಲಿ ತಾಂತ್ರಿಕ ದೋಷವನ್ನು ಸರಿಪಡಿಸುವಂತೆ ಯೋಜನಾ ನಿರ್ದೇಶಕರು, ಹೆಚ್.ಆರ್.ಎಮ್.ಎಸ್. ಸೆಲ್ ರವರಿಗೆ ಈಗಾಗಲೇ ಪತ್ರ ಬರೆಯಲಾಗಿದೆ. ತಂತ್ರಾಂಶವನ್ನು ಉನ್ನತೀಕರಿಸುವ ಪ್ರಕ್ರಿಯೆಗೆ ಸಮಯಾವಕಾಶದ ಅವಶ್ಯಕತೆ ಇರುವುದಾಗಿ ತಿಳಿಸಿರುತ್ತಾರೆ. ಆದ್ದರಿಂದ ಹೆಚ್.ಆರ್.ಎಮ್.ಎಸ್. ಸೆಲ್ ವತಿಯಿಂದ ತಾಂತ್ರಿಕದೋಷ ಬಗೆಹರಿಯುವವರೆಗೆ ತಾತ್ಕಾಲಿಕವಾಗಿ ದೃಢೀಕೃತ ದಾಖಲೆಗಳ (Manual Documents) ಆಧಾರದ ಮೇಲೆ ಸಂಘದ ಸಿಬ್ಬಂದಿಗಳಿಗೆ ಯೋಜನೆಯನ್ನು ಪ್ರಾರಂಭಿಸಲು ಕಾರ್ಯನಿರ್ವಾಹಕ ನಿರ್ದೇಶಕರು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಪತ್ರದ ಮೂಲಕ ಕೋರಲಾಗಿರುತ್ತದೆ. ಇದಕ್ಕೆ ಸದರಿಯವರು ಒಪ್ಪಿದಲ್ಲಿ, ಸಂಘದ ಖಾಯಂ ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮುಂದಿನ ಕ್ರಮವಹಿಸಲಾಗುವುದು.

**ಖಾಯಂ ಶಿಕ್ಷಕರಿಗೆ ವಿಶೇಷ ಭತ್ಯೆ:-** ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳಿಗೆ ಮೂಲ ವೇತನದ ಶೇ 10% ಶಾಲಾ ಕ್ಯಾಂಪಸ್ ವಿಶೇಷ ಭತ್ಯೆಯನ್ನು ಮಂಜೂರು ಮಾಡುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ಹಿಂಬರಹ ನೀಡಿರುತ್ತದೆ.

**ಎನ್.ಪಿ.ಎಸ್ ವಂತಿಕೆ ನೀಡುವ ಬಗ್ಗೆ :-** ಸಂಘದಡಿಯಲ್ಲಿನ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ/ ಬೋಧಕೇತರ ಸಿಬ್ಬಂದಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಸಕಇ 352 ಮೊದೇಶಾ 2016 ದಿನಾಂಕ:26.12.2016 ರಲ್ಲಿ ನೂತನ ಪಿಂಚಣಿ ಯೋಜನೆಯನ್ನು ಅಳವಡಿಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ. ಅದರಂತೆ ಎನ್.ಪಿ.ಎಸ್ ನ ಶೇ.10 ರಷ್ಟು ಸರ್ಕಾರದ ವಂತಿಗೆಯನ್ನು ಪಾವತಿ ಮಾಡಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಆ.ಇ 37 ಪಿ.ಇ.ಎನ್ 2019 ಬೆಂಗಳೂರು ದಿನಾಂಕ:31.08.2019 ರ ಪ್ರಕಾರ ಸರ್ಕಾರದ ವಂತಿಗೆಯನ್ನು ಶೇ.10 ರಿಂದ 14ಕ್ಕೆ ದಿ: 01.04.2019 ರಿಂದ ಜಾರಿಗೆ ಬರುವಂತೆ ಹೆಚ್ಚಿಸಲಾಗಿರುತ್ತದೆ.

ಸಂಘದ ಖಾಯಂ ಸಿಬ್ಬಂದಿಗಳಿಗೂ ಎನ್.ಪಿ.ಎಸ್ ಎಂಪ್ಲಾಯರ್ ವಂತಿಗೆಯನ್ನು ಶೇ.10 ರಿಂದ 14ಕ್ಕೆ ಹೆಚ್ಚಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಹೆಚ್ಚುವರಿ ಮಾಹಿತಿ ಕೋರಿದ್ದು, ಸದರಿ ಮಾಹಿತಿಯನ್ನು ಒದಗಿಸಲು ಕ್ರಮವಹಿಸಲಾಗುತ್ತಿದ್ದು, ಅನುಮೋದನೆ ದೊರೆತ ನಂತರ ನಿಯಮಾನುಸಾರ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಶೇ.14% ರಷ್ಟು ಎನ್.ಪಿ.ಎಸ್ ಎಂಪ್ಲಾಯರ್ ವಂತಿಗೆಯನ್ನು ಪಾವತಿಸಲು ಕ್ರಮವಹಿಸಲಾಗುವುದು.

**ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ:-** 2021-22ನೇ ಸಾಲಿನಲ್ಲಿ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಿದ್ಧಪಡಿಸಿದ ಸಮವಸ್ತ್ರ, ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು, ಶುಚಿ ಸಂಭ್ರಮ ಕಿಟ್ ಹಾಗೂ ಶೂ, ಸಾಕ್ಸ್, ಟೈ ಮತ್ತು ಬೆಲ್ಟ್‌ಗಳನ್ನು ಪೂರೈಸುವ ಪ್ರಸ್ತಾವನೆಗೆ ಮಾರ್ಚ್ 2021ರ ಮಾಹೆಯಲ್ಲಿ ಆರ್ಥಿಕ ಇಲಾಖೆ ಅನುಮೋದನೆ ಕೋರಲಾಗಿದ್ದು, ಕೋವಿಡ್-19ರ ಸಂಕ್ರಮಣ ಕಾರಣದಿಂದ ಶಾಲೆ/ಕಾಲೇಜುಗಳಿಗೆ ರಜೆ

ಘೋಷಿಸಿದ್ದ ಹಿನ್ನಲೆಯಲ್ಲಿ ಶಾಲೆ/ಕಾಲೇಜುಗಳು ಪುನರಾರಂಭದ ನಂತರ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಲಾಗಿತ್ತು. ಅದರನ್ವಯ ಮರು ಪ್ರಸ್ತಾವನೆ ಸಲ್ಲಿಸಿ ಆಡಳಿತಾತ್ಮಕ ಅನುಮೋದನೆ ಪಡೆಯಲು ವಿಳಂಬವಾಗಿರುವ ಹಿನ್ನಲೆಯಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಸಕಾಲದಲ್ಲಿ ಒದಗಿಸಲು ಸಾಧ್ಯವಾಗಿರುವುದಿಲ್ಲ. ಪ್ರಸ್ತತ ಸದರಿ ಸಾಮಗ್ರಿಗಳಿಗೆ ಸರಬರಾಜು ಆದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಸಂಘದ ಅಧೀನದಲ್ಲಿನ ಎಲ್ಲಾ ವಸತಿ ಶಾಲೆ/ಕಾಲೇಜುಗಳಿಗೆ ಮಾದರಿ ವಸತಿ ಶಾಲೆ/ಕಾಲೇಜಿಗೆ ನಿಗದಿಪಡಿಸಿರುವ 43 ಮೂಲಭೂತ ಸೌಕರ್ಯಗಳಲ್ಲಿ, ಈಗಾಗಲೇ ಲಭ್ಯವಿರುವ ಅನುದಾನದಲ್ಲಿ ಸರಬರಾಜು ಮಾಡಿರುವ ಮೂಲಭೂತ ಸೌಕರ್ಯಗಳನ್ನು ಹೊರತುಪಡಿಸಿ ಪ್ರಾಂಶುಪಾಲರು ಸಲ್ಲಿಸಿರುವ ಸಮಗ್ರ ಬೇಡಿಕೆಯಂತೆ ಅಗತ್ಯ ಮೂಲಭೂತ ಸೌಕರ್ಯಗಳಿಗೆ ಒಟ್ಟು ರೂ.593.54 ಕೋಟಿಗಳು ಅವಶ್ಯಕತೆ ಇರುತ್ತದೆ. ಈ ಸಂಬಂಧ ಆರ್ಥಿಕ ಇಲಾಖೆಗೆ ಅನುದಾನ ಬಿಡುಗಡೆ ಹಾಗೂ ಆಡಳಿತಾತ್ಮಕ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಅನುಮೋದನೆ ದೊರೆತ ನಂತರ ತುರ್ತಾಗಿ ಸಾಮಗ್ರಿಗಳನ್ನು ಒದಗಿಸಲು ಕ್ರಮವಹಿಸಲಾಗುವುದು.

**ಅತಿಥಿ ಶಿಕ್ಷಕರನ್ನು ಖಾಯಂಗೊಳಿಸುವ ಬಗ್ಗೆ :-** ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ WP No:12562-12564/2018, WP No 46240/2018, WP No 45714-45716/2018, 52876/2018 & 1412-1546/2019 ರ ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅಂತಿಮ ಆದೇಶವನ್ನು ನೀಡಿರುತ್ತದೆ.

> "The third respondent is directed to consider the representation of the petitioners strictly in accordance with law. The writ petitions stand disposed off accordingly. The interim order granted earlier shall stand dissolved".

ಮಾನ್ಯ ನ್ಯಾಯಾಲಯದ ಆದೇಶದಂತೆ ಅತಿಥಿ ಶಿಕ್ಷಕರ ಮನವಿಗಳನ್ನು ಪರಿಶೀಲಿಸಿ, ಅತಿಥಿ ಶಿಕ್ಷಕರನ್ನು ಪೂರ್ಣ ಕಾಲಿಕ ಶಿಕ್ಷಕರನ್ನಾಗಿ ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ ಎಂದು ಹಿಂಬರಹವನ್ನು ನೀಡಲಾಗಿರುತ್ತದೆ. ಆದ್ದರಿಂದ ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ.

**ಕಡತ ಸಂಖ್ಯೆ: ಸಕಇ 138 ಮೊದೇಶಾ 2022**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ನಿ-330
ಶ್ರೀ. 1

**ಶ್ರೀ ಮರಿತಿಬ್ಬೇಗೌಡ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಬೋಧಕ/ಬೋಧಕೇತರರಿಗೆ ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ ಇ.ಜಿ.ಐ.ಎಸ್. ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ನೀಡದೆ ಇರುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾಡದಿರುವುದರಿಂದ ಉಂಟಾಗುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಲು ಬಯಸುತ್ತೇನೆ.

---

****

**ಉತ್ತರ:-**

(1) **ಕೆ.ಜಿ.ಐ.ಡಿ ಮತ್ತು ಇ.ಜಿ.ಐ.ಎಸ್:-** ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿರಸ್ಕರಿಸಿ ಹಿಂಬರಹ ನೀಡಿರುತ್ತದೆ.

ಸದರಿ ಸೌಲಭ್ಯವನ್ನು ಅಳವಡಿಸಿಕೊಂಡಲ್ಲಿ ಮಾತ್ರ ಇ.ಜಿ.ಐ.ಎಸ್ ಸೌಲಭ್ಯವನ್ನು ವಿಸ್ತರಿಸಬಹುದಾಗಿದೆ. ಈ ಹಿನ್ನೆಲೆಯಲ್ಲಿ ಸಂಘದ ಖಾಯಂ ನೌಕರರಿಗೆ ಇ.ಜಿ.ಐ.ಎಸ್ ಸೌಲಭ್ಯವನ್ನು ವಿಸ್ತರಿಸಿರುವುದಿಲ್ಲ.

ಆದಾಗ್ಯೂ, ಸಹ ಸಂಘದ ಖಾಯಂ ನೌಕರರ ಹಿತದೃಷ್ಟಿಯಿಂದ ದಿನಾಂಕ:01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 23 ಮೃತರ ಕುಟುಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ.

(2) **ಡಿ.ಸಿ.ಆರ್.ಜಿ:-** ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (DCRG) ಸೌಲಭ್ಯ ವಿಸ್ತರಿಸುವ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

(3) **ಜ್ಯೋತಿ ಸಂಜೀವಿನಿ:-** ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ನೌಕರರು ಮತ್ತು ಅವರ ಅವಲಂಭಿತರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅಳವಡಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನೊಂದಿಗೆ ಸಮಾಲೋಚಿಸಿ ಯೋಜನೆ ಯನ್ನು ವಿಸ್ತರಿಸುವಂತೆ ಅಭಿಪ್ರಾಯ ನೀಡಿದೆ. ಅದರಂತೆ, ಕಾರ್ಯನಿರ್ವಾಹಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರು ಸಂಘದ ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಷರತ್ತುಗಳಿಗೆ ಒಳಪಟ್ಟು ತಾತ್ವಿಕ ಒಪ್ಪಿಗೆ ನೀಡಿರುತ್ತಾರೆ. ಅದರಂತೆ, ಈಗಾಗಲೇ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳ ಸಿಬ್ಬಂದಿಗಳು ಮತ್ತು ಅವರ ಅವಲಂಬಿತರ ಹೆಸರು, ವಯಸ್ಸು, ಆಧಾರ್, Bio metric finger impression/IRIS, ವಿಳಾಸ ಇತ್ಯಾದಿ ವಿವರಗಳನ್ನು ಸಂಘದ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ನಮೂದಿಸಲು ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ. ಆದರೆ, ಪ್ರಸ್ತುತ ಲಭ್ಯವಿರುವ ಹೆಚ್.ಆರ್.ಎಮ್.ಎಸ್ ತಂತ್ರಾಂಶದಲ್ಲಿ ಮೇಲ್ಕಂಡ ಮಾಹಿತಿಯನ್ನು

ನಮೂದಿಸಲು ತಾಂತ್ರಿಕ ತೊಂದರೆಗಳು ಇರುವುದಾಗಿ ವಸತಿ ಶಾಲೆಗಳ ಪ್ರಾಂಶುಪಾಲರು ತಿಳಿಸಿರುತ್ತಾರೆ. ಈ ಹಿನ್ನಲೆಯಲ್ಲಿ ತಾಂತ್ರಿಕ ದೋಷವನ್ನು ಸರಿಪಡಿಸುವಂತೆ ಯೋಜನಾ ನಿರ್ದೇಶಕರು, ಹೆಚ್.ಆರ್.ಎಮ್.ಎಸ್. ಸೆಲ್ ರವರಿಗೆ ಈಗಾಗಲೇ ಪತ್ರ ಬರೆಯಲಾಗಿದೆ. ತಂತ್ರಾಂಶವನ್ನು ಉನ್ನತೀಕರಿಸುವ ಪ್ರಕ್ರಿಯೆಗೆ ಸಮಯಾವಕಾಶದ ಅವಶ್ಯಕತೆ ಇರುವುದಾಗಿ ತಿಳಿಸಿರುತ್ತಾರೆ. ಆದ್ದರಿಂದ ಹೆಚ್.ಆರ್.ಎಮ್.ಎಸ್. ಸೆಲ್ ವತಿಯಿಂದ ತಾಂತ್ರಿಕದೋಷ ಬಗೆಹರಿಯುವವರೆಗೆ ತಾತ್ಕಾಲಿಕವಾಗಿ ದೃಢೀಕೃತ ದಾಖಲೆಗಳ (Manual Documents) ಆಧಾರದ ಮೇಲೆ ಸಂಘದ ಸಿಬ್ಬಂದಿಗಳಿಗೆ ಯೋಜನೆಯನ್ನು ಪ್ರಾರಂಭಿಸಲು ಕಾರ್ಯನಿರ್ವಾಹಕ ನಿರ್ದೇಶಕರು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಪತ್ರದ ಮೂಲಕ ಕೋರಲಾಗಿರುತ್ತದೆ. ಇದಕ್ಕೆ ಸದರಿಯವರು ಒಪ್ಪಿದಲ್ಲಿ, ಸಂಘದ ಖಾಯಂ ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮುಂದಿನ ಕ್ರಮವಹಿಸಲಾಗುವುದು.

**(4) ಇತರೆ ಸೌಲಭ್ಯಗಳು:-** ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

ಮೇಲ್ಕಂಡಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಸರ್ಕಾರದ ನಿರ್ದೇಶನ ಮತ್ತು ಮಾರ್ಗಸೂಚಿಗಳಂತೆ ವಸತಿ ಶಾಲೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉತ್ತಮವಾದ ಶಿಕ್ಷಣ ಒದಗಿಸಲು ಸಾಧ್ಯವಾಗುತ್ತಿದೆ. ಆದ್ದರಿಂದ, ಈ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಅವಶ್ಯಕತೆ ಕಂಡುಬರುವುದಿಲ್ಲ.

**ಕಡತ ಸಂಖ್ಯೆ: ಸಕಇ 77 ಮೊದೇಶಾ 2022**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು